# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಕೆ.ಎಂ.ನಾಗರಾಜ್, ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಎಸ್. ಉಮೇಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರುಗಳ ಸೇವೆಯನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿ ವಿಲೀನಗೊಳಿಸುವ ಬಗ್ಗೆ.

ಓದಲಾಗಿದೆ:-

1. ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ಆದೇಶ ಸಂಖ್ಯೆ ಗ್ರಾಅಪ 139 ಸೇಶಿಕಾ 99 ದಿನಾಂಕ 24-05-2008
2. ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಅರ್ಜಿ ಸಂಖ್ಯೆ 3544-3546/2012 C/W 209-212/2013 ದಿನಾಂಕ 07-12-2012
3. ಲೋಕೋಪಯೋಗಿ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ ಲೋಇ 315 ಸೇಸಕಿ 2012 ದಿನಾಂಕ 08-01-2013
4. ಶ್ರೀ ಕೆ.ಎಂ.ನಾಗರಾಜ್, ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಎಸ್. ಉಮೇಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರುಗಳು ಸಲ್ಲಿಸಿರುವ ಮನವಿ ದಿನಾಂಕ 6-6-2013

*****

ಪ್ರಸ್ತಾವನೆ:

ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ 24-05-2008ರ ಸರ್ಕಾರದ ಆದೇಶದಲ್ಲಿ ರಚಿಸಲಾಗಿದೆ. ಈ ನಿಯಮಗಳ ನಿಯಮ 2(2)ರ ಪ್ರಕಾರ, ಕರ್ನಾಟಕ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ವಿವಿಧ ಹುದ್ದೆಗಳಲ್ಲಿ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವವರು ಹಾಗೂ ಲೋಕೋಪಯೋಗಿ ಇಲಾಖೆಯಲ್ಲಿ ಸಹ ಕಾರ್ಯನಿರ್ವಹಿಸುತ್ತಿರುವವರು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿನ ಸೇವೆಯಲ್ಲಿ ವಿಲೀನಗೊಳ್ಳಲು ಆಸಕ್ತಿ ಹೊಂದಿದಲ್ಲಿ ಅಂತಹವರು 3 ತಿಂಗಳ ಕಾಲಾವಧಿಯೊಳಗೆ ಹಿಂಪಡೆಯಲಾಗದಂತಹ ಇಚ್ಛೆಯನ್ನು ವ್ಯಕ್ತಪಡಿಸಿದಲ್ಲಿ ಅಂತಹವರ ಸೇವೆಯನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿ ವಿಲೀನಗೊಳಿಸಲು ಅವಕಾಶ ಕಲ್ಪಿಸಲಾಗಿದೆ. ಈ ರೀತಿ ಇಚ್ಛೆಯನ್ನು ವ್ಯಕ್ತಪಡಿಸಿದ ನಂತರ ವಿಲೀನಗೊಂಡ ವ್ಯಕ್ತಿಗಳ ಸೇವಾ ಜೇಷ್ಟತೆಯನ್ನು ಕರ್ನಾಟಕ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿ ವಿಲೀನಗೊಳಿಸುವಾಗ ಅವರ ಮಾತೃ ಇಲಾಖೆಯಲ್ಲಿನ ಅಂತರ್ ಜೇಷ್ಟತೆಯಂತೆ ಕರ್ನಾಟಕ ಸರ್ಕಾರಿ ನೌಕರರ ಜೇಷ್ಟತೆ ನಿಯಮಗಳು 1957ನ್ನು ಅನುಸರಿಸಿ ನಿಗದಿಪಡಿಸಬೇಕಾಗುತ್ತದೆ. ಈ ರೀತಿ ಇಚ್ಛಾ ಪತ್ರವನ್ನು ವ್ಯಕ್ತಪಡಿಸಲು ನಿಗದಿಪಡಿಸಿದ್ದ ಅವಧಿಯು ದಿನಾಂಕ 23-08-2008ಕ್ಕೆ ಅಂತ್ಯಗೊಂಡಿರುತ್ತದೆ. ಶ್ರೀ ಎಸ್.ಉಮೇಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಕೆ.ಎಂ.ನಾಗರಾಜು, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರುಗಳು 2008ರಲ್ಲಿ ತಮ್ಮ ಇಚ್ಛಾ ಪತ್ರಗಳನ್ನು ಸಲಿಸಿ ಅವರುಗಳ ಸೇವೆಯನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿ ವಿಲೀನಗೊಳಿಸುವಂತೆ ಕೋರಿದ್ದರು. ಈ ರೀತಿ ಇಚ್ಛೆ ವ್ಯಕ್ತಪಡಿಸಿ ಸಲ್ಲಿಸಿದ ಮನವಿಗಳನ್ನು ಅವರ ಮಾತೃ ಇಲಾಖೆಯಾದ ಲೋಕೋಪಯೋಗಿ ಇಲಾಖೆಯ ಸಹಮತಿ ನೀಡಲು ಕೋರಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಕಳುಹಿಸಿತ್ತು.

---2

ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಸೇವೆಯಲ್ಲಿ ವಿಲೀನಗೊಳಿಸಲು ಅಭಿಮತ ವ್ಯಕ್ತಪಡಿಸಿ ಅದು ಇನ್ನು ಪರಿಗಣನೆಯಲ್ಲಿರುವಾಗ ಜಿಲ್ಲಾ ಪಂಚಾಯತ್ ಸೇವೆಗೆ ಸೇರಿದ ಇಂಜಿನಿಯರ್‌ಗಳ ಮನವಿಗಳನ್ನು ಮುಂಬಡ್ತಿಗೆ ಪರಿಗಣಿಸಿದಲ್ಲಿ ತಮ್ಮ ಜೇಷ್ಠತೆಗೆ ದಕ್ಕೆ ಉಂಟಾಗುತ್ತದೆ ಎಂಬ ಕಾರಣಗಳ ಮೇಲೆ ಲೋಕೋಪಯೋಗಿ ಇಲಾಖೆ ಸೇವೆಗೆ ಸೇರಿದ ಶ್ರೀ ಕೆ.ಎಂ.ನಾಗರಾಜ್, ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚನ್ನರಾಯಪಟ್ಟಣ ಮತ್ತು ಶ್ರೀ ಎಸ್.ಉಮೇಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಯೋಜನಾ ಉಪ ವಿಭಾಗ, ಬೆಂಗಳೂರು ನಗರ ಹಾಗೂ ಮತ್ತೋರ್ವ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರಾದ ಶ್ರೀ ಎಂ.ನಾಗರಾಜು ರವರುಗಳು ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಅರ್ಜಿ ಸಂಖ್ಯೆ 3544-3546/2012ನ್ನು ಸಲ್ಲಿಸಿದ್ದು, ಈ ಅರ್ಜಿಗಳಲ್ಲಿ ಮಾನ್ಯ ನ್ಯಾಯ ಮಂಡಳಿಯು ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ 07-12-2012ರ ಆದೇಶದಲ್ಲಿ ಮಧ್ಯಂತರ ತಡೆಯಾಜ್ಞೆಯನ್ನು ನೀಡಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿ ಜಿಲ್ಲಾ ಪಂಚಾಯತ್ ಸೇವೆಗೆ ಸೇರಿದ ಇಂಜಿನಿಯರ್‌ಗಳಿಗೆ ಕಾರ್ಯಪಾಲಕ ಇಂಜಿನಿಯರ್ ಹುದ್ದೆಗೆ ನಿಯಮ 32ರಡಿಯಲ್ಲಿ ಸ್ವತಂತ್ರ ಪ್ರಭಾರದಲ್ಲಿರಿಸುವ ಬಗ್ಗೆ ಅಥವಾ ಮುಂಬಡ್ತಿ ಬಗ್ಗೆ ಪ್ರಸ್ತಾವನೆ ಇದ್ದಲ್ಲಿ ಈ ಪ್ರಕ್ರಿಯೆಯನ್ನು ಎರಡು ತಿಂಗಳ ಅವಧಿಯವರೆಗೆ ತಡೆಹಿಡಿಯಲು ಆದೇಶಿಸಿ ನಂತರ ಕಾಲಕಾಲಕ್ಕೆ ತಡೆಯಾಜ್ಞೆಯನ್ನು ವಿಸ್ತರಿಸಿದೆ. ಮುಂದುವರೆದು, ಮೇಲ್ಕಂಡ ಅರ್ಜಿಗಳಲ್ಲಿ ನ್ಯಾಯ ಮಂಡಳಿಯು ದಿನಾಂಕ 07-12-2012ರ ನಿರ್ದೇಶನದಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿ ವಿಲೀನಗೊಳಿಸಲು ಇಚ್ಛೆ ವ್ಯಕ್ತಪಡಿಸಿದ ಮನವಿಗಳನ್ನು ಅರ್ಜಿದಾರರು 2008ರಲ್ಲೇ ಸಲ್ಲಿಸಿದ್ದರೂ ಇದುವರೆವಿಗೂ ಆ ಕುರಿತು ಸರ್ಕಾರ ನಿರ್ಧಾರ ತೆಗೆದುಕೊಂಡಿಲ್ಲದಿರುವುದನ್ನು ಗಮನಸಿ ದಿನಾಂಕ 09-01-2013ರೊಳಗಾಗಿ ತೀರ್ಮಾನ ತೆಗೆದುಕೊಳ್ಳಬೇಕೆಂದು ನಿರ್ದೇಶನ ನೀಡಿತ್ತು. ಆ ಪ್ರಕಾರ ಪುನ: ಪ್ರಕರಣವು ದಿನಾಂಕ 15-01-2013ರಂದು ನ್ಯಾಯ ಮಂಡಳಿಯ ಮುಂದೆ ವಿಚಾರಣೆಗೆ ಬಂದಾಗ ಶ್ರೀ ಕೆ.ಎಂ.ನಾಗರಾಜು ಮತ್ತು ಶ್ರೀ ಎಸ್.ಉಮೇಶ್ ರವರುಗಳ ಸೇವೆಯನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಸೇವೆಯಲ್ಲಿ ವಿಲೀನಗೊಳಿಸಲು ಲೋಕೋಪಯೋಗಿ ಇಲಾಖೆಯು ಸಹಮತಿಯನ್ನು ದಿನಾಂಕ 8-1-2013ರಂದು ವ್ಯಕ್ತಪಡಿಸಿರುವುದನ್ನು ಗಮನಿಸಿ ಸದರಿ ಅಧಿಕಾರಿಗಳ ವಿಲೀನಾತಿ ಬಗ್ಗೆ ದಿನಾಂಕ 29-01-2013ರೊಳಗೆ ನಿರ್ದಿಷ್ಟ ತೀರ್ಮಾನ ತೆಗೆದುಕೊಂಡು ಮಾನ್ಯ ನ್ಯಾಯ ಮಂಡಳಿಗೆ ತಿಳಿಸುವಂತೆ ನಿರ್ದೇಶಿಸಿತ್ತು.

ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಿನಾಂಕ 08-01-2013ರ ಅನಧಿಕೃತ ಟಿಪ್ಪಣಿಯಲ್ಲಿ ಶ್ರೀ ಕೆ.ಎಂ.ನಾಗರಾಜ್, ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಎಸ್. ಉಮೇಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಎಂ.ನಾಗರಾಜು, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ರವರುಗಳನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಸೇವೆಯಲ್ಲಿ ವಿಲೀನಗೊಳಿಸಲು ಯಾವುದೇ ಅಭ್ಯಂತರವಿರುವುದಿಲ್ಲವೆಂದು ಲೋಕೋಪಯೋಗಿ ಇಲಾಖೆ ತಿಳಿಸಿದೆ.

ಏತನ್ಮಧ್ಯೆ, -- ಶ್ರೀ ಕೆ.ಎಂ.ನಾಗರಾಜ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಕಾರ್ಯಪಾಲಕ ಇಂಜಿನಿಯರ್, ನಿಯಮ-32 ರನ್ವಯ ಸ್ವತಂತ್ರ ಪ್ರಭಾರ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚನ್ನರಾಯಪಟ್ಟಣ) ಮತ್ತು ಶ್ರೀ ಎಸ್.ಉಮೇಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಯೋಜನಾ ಉಪ ವಿಭಾಗ, ಬೆಂಗಳೂರು ನಗರ ಇವರುಗಳು ಮೇಲೆ ಕ್ರಮ ಸಂಖ್ಯೆ (4) ರಲ್ಲಿ ಓದಲಾದ ಮನವಿಗಳಲ್ಲಿ ಮಾನ್ಯ ನ್ಯಾಯ ಮಂಡಳಿಯು ದಿನಾಂಕ 15-01-2013 ರಂದು ನೀಡಿರುವ ಮಧ್ಯಂತರ ತೀರ್ಪಿನಲ್ಲಿ ಅವರುಗಳ ಸೇವೆಯನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿ ವಿಲೀನಗೊಳಿಸುವ ಕುರಿತಂತೆ ಆದೇಶ ನೀಡಿದ್ದು, ಲೋಕೋಪಯೋಗಿ ಇಲಾಖೆಯು ಸಹ ತಮ್ಮ ಸಹಮತಿಯನ್ನು ವ್ಯಕ್ತಪಡಿಸಿರುವ ಹಿನ್ನೆಲೆಯಲ್ಲಿ ಅವರುಗಳ ಸೇವೆಯನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಸೇವೆಯಲ್ಲಿ ವಿಲೀನಗೊಳಿಸಬೇಕೆಂದು ಕೋರಿರುತ್ತಾರೆ.

---3

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

<u>ಆದೇಶ ಸಂಖ್ಯೆ. ಗ್ರಾಅಪ 341 ಜಿಪಅ 2012, ಬೆಂಗಳೂರು, ದಿನಾಂಕ.07-09-2013</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಮೂಲತ: ಲೋಕೋಪಯೋಗಿ ಇಲಾಖೆಯ ಸೇವೆಗೆ ಸೇರಿದ ಹಾಗೂ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಶ್ರೀ ಕೆ.ಎಂ.ನಾಗರಾಜ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಕಾರ್ಯಪಾಲಕ ಇಂಜಿನಿಯರ್, ನಿಯಮ-32 ರನ್ವಯ ಸ್ವತಂತ್ರ ಪ್ರಭಾರ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚನ್ನರಾಯಪಟ್ಟಣ) ಹಾಗೂ ಶ್ರೀ ಎಸ್.ಉಮೇಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಯೋಜನಾ ಉಪ ವಿಭಾಗ, ಬೆಂಗಳೂರು ನಗರ, ಬೆಂಗಳೂರು ಇವರುಗಳ ಸೇವೆಯನ್ನು ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ) ನೇಮಕಾತಿ ನಿಯಮಗಳು 1977ರ ನಿಯಮ 16 (ಎ) **(ii)** ರನ್ವಯ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ವೃಂದಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಅಂತರ್ ಜೇಷ್ಠತೆಯನ್ನು ಕಾಯ್ದಿರಿಸಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿ ವಿಲೀನಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಹೆಚ್.ಸಿ.ರಾಜಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ/ ಸಣ್ಣ ನೀರಾವರಿ ಇಲಾಖೆ.
3. ಮುಖ್ಯ ಇಂಜಿನಿಯರ್, ಪಂಚಾಯಿತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,
4. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕೆ.ಆರ್.ಆರ್.ಡಿ.ಎ., ರಾಜಕುಮಾರ್ ರಸ್ತೆ, ರಾಜಾಜಿನಗರ 1ನೇ ಬ್ಲಾಕ್, ಬೆಂಗಳೂರು.
5. ನಿರ್ದೇಶಕರು, ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ, ಕಾವೇರಿ ಭವನ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾಸನ / ಬೆಂಗಳೂರು ನಗರ
8. ಸಂಬಂಧಪಟ್ಟ ಅಧಿಕಾರಿಗಳಿಗೆ.
9. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ / ಜಲಸಂಪನ್ಮೂಲ ಇಲಾಖೆ, (ಸೇವೆಗಳು-ಎ) / (ಸೇವೆಗಳು-ಸಿ)
10. ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾ.ಅ.ಪಂ.ರಾಜ್ ಇಲಾಖೆ (ಸೇವೆಗಳು-ಬಿ).
11. ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
12. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್)/ ಹೆಚ್ಚುವರಿ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
13. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
14. ರಕ್ಷಾ ಕಡತ / ಮಾಹಿತಿ ಕೇಂದ್ರ/ ಹೆಚ್ಚುವರಿ ಪ್ರತಿಗಳು.